All India Radio: Bangalore
National Bulletin In Kannada
31.03.2025 19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಆರೋಗ್ಯ ವಲಯದ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದಿಂದ ಸಮಗ್ರ ಉಪಕ್ರಮ -ಕೇಂದ್ರ ಗೃಹ ಸಚಿವ ಅಮಿತ್ ಶಾ
- ಗ್ರಾಮೀಣ ಭಾಗದ ಯುವಕರು ನವೋದ್ಯಮ ಸ್ಥಾಪಿಸಲು ಮುಂದಾಗುವಂತೆ ಸಚಿವ ಕಿಶನ್ ರೆಡ್ಡಿ ಕರೆ
- ನಾಳೆ ಹೊಸ ಹಣಕಾಸು ವರ್ಷ ಪ್ರಾರಂಭ; ಪ್ರಮುಖ ತೆರಿಗೆ ಹಾಗೂ ನೀತಿ ಸುಧಾರಣೆಗಳು ಜಾರಿ
- ಆಯುಷ್ಮಾನ್ ಭಾರತ್ ಯೋಜನೆಯಡಿ ೧೫೦ ದಶಲಕ್ಷಕ್ಕೂ ಅಧಿಕ ಮಹಿಳೆಯರಿಗೆ ಸ್ತನ ಕ್ಯಾನ್ಸರ್ ತಪಾಸಣೆ - ಸಚಿವೆ ಅನುಪ್ರಿಯಾ ಪಟೇಲ್
- ಐಪಿಎಲ್ ಕ್ರಿಕೆಟ್: ಮುಂಬೈ ಇಂಡಿಯನ್ಸ್ - ಕೊಲ್ಕತ್ತಾ ನೈಟ್ ರೈಡರ್ಸ್ ಮುಖಾಮುಖಿ

****************

ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ ಒಂದು ದಶಕದಲ್ಲಿ ದೇಶದ ಆರೋಗ್ಯ ವಲಯದ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ಸಮಗ್ರ ಉಪಕ್ರಮ ಕೈಗೊಂಡಿದೆ ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಅವರು ಹರಿಯಾಣದ ಹಿಸಾರ್‌ನ ಮಹಾರಾಜ ಅಗ್ರ ಸೇನಾ ವೈದ್ಯಕೀಯ ವಿದ್ಯಾಲಯದ ಆವರಣದಲ್ಲಿ ಮಹಾರಾಜ ಅಗ್ರ ಸೇನಾ ಅವರ ಪುತ್ಥಳಿ ಅನಾವರಣಗೊಳಿಸಿ ಮಾತನಾಡುತ್ತಿದ್ದರು.

ಕೇಂದ್ರ ಸರ್ಕಾರ ಕೈಗೊಂಡ ವ್ಯಾಪಕ ಉಪಕ್ರಮಗಳಿಂದ ಆರೋಗ್ಯ ಮೂಲಸೌಕರ್ಯದಲ್ಲಿ ಗಮನಾರ್ಹ ಸುಧಾರಣೆ ಕಂಡು ಬಂದಿದೆ. ೨೦೧೩-೧೪ ರಲ್ಲಿ ಆರೋಗ್ಯ ಕ್ಷೇತ್ರಕ್ಕೆ ೩೭ ಸಾವಿರ ಕೋಟಿ ರೂಪಾಯಿ ಬಜೆಟ್ ನಿಗದಿಯಾಗಿತ್ತು. ಅದು ೨೦೨೫-೨೬ರಲ್ಲಿ ಒಂದು ಲಕ್ಷ ೩೭ ಸಾವಿರ ಕೋಟಿ ರೂಪಾಯಿಗೆ ಏರಿದೆ. ಅಖಿಲ ಭಾರತ ವೈದ್ಯ ವಿಜ್ಞಾನ ಸಂಸ್ಥೆ-ಏಮ್ಸ್‌ಗಳ ಸಂಖ್ಯೆ ೭ ರಿಂದ ೨೩ಕ್ಕೆ ಏರಿದೆ. ಮೆಡಿಕಲ್ ಕಾಲೇಜುಗಳ ಸಂಖ್ಯೆ ೩೮೭ ರಿಂದ ೭೮೬ಕ್ಕೆ ಹೆಚ್ಚಿದೆ. ವೈದ್ಯಕೀಯ ಸೀಟುಗಳ ಸಂಖ್ಯೆ ೫೧ ಸಾವಿರದಿಂದ ೧ ಲಕ್ಷದ ೧೫ ಸಾವಿರಕ್ಕೆ ಹೆಚ್ಚಿದೆ. ಮುಂದಿನ ಐದು ವರ್ಷಗಳಲ್ಲಿ ಹೆಚ್ಚುವರಿಯಾಗಿ ೮೫ ಸಾವಿರ ಸೀಟುಗಳನ್ನು ಹೆಚ್ಚಿಸಲಾಗುತ್ತಿದೆ ಎಂದು ಅಮಿತ್ ಶಾ ಹೇಳಿದರು.

ಸರ್ಕಾರ ಕೈಗೊಂಡ ಹಲವಾರು ಉಪಕ್ರಮಗಳನ್ನು ಗೃಹ ಸಚಿವ ಅಮಿತ್ ಶಾ ವಿವರಿಸಿದರು.

ಧ್ವನಿ: ಅಮಿತ್ ಶಾ ೨೯ ಸೆಕೆಂಡ್‌ಗಳು

೨೫ ಕೋಟಿ ಜನರನ್ನು ಬಡತನ ರೇಖೆಯಿಂದ ಮೇಲೆತ್ತಲಾಗಿದೆ. ೪ ಕೋಟಿ ಮನೆಗಳನ್ನು ನಿರ್ಮಿಸಿ, ೨೦ ಕೋಟಿಗೂ ಅಧಿಕ ಜನರಿಗೆ ಆಶ್ರಯ ಒದಗಿಸಲಾಗಿದೆ. ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿ ಸರ್ಕಾರ ೮೧ ಕೋಟಿಗೂ ಅಧಿಕ ಫಲಾನುಭವಿಗಳಿಗೆ ಉಚಿತ ಆಹಾರ ಧಾನ್ಯ ಒದಗಿಸುತ್ತಿದೆ. ಸ್ವಚ್ಛ ಭಾರತ್ ಮಿಷನ್‌ನಡಿ ಪ್ರತಿ ಮನೆಗೂ ಶೌಚಾಲಯ ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದರು.

****************

ದೆಹಲಿ ಎನ್‌ಸಿಆರ್ ವಲಯದಲ್ಲಿ ಬೃಹತ್ ಮಾದಕ ದ್ರವ್ಯ ಕಾರ್ಯ ಜಾಲವನ್ನು ಭೇದಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಮಾದಕ ದ್ರವ್ಯ ನಿಯಂತ್ರಣ ಬ್ಯೂರೊ ಕಾರ್ಯಚರಣೆ ನಡೆಸಿ, ಐವರನ್ನು ಬಂಧಿಸಿದೆ. ೨೭ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಮಾದಕ ದ್ರವ್ಯಗಳನ್ನು ಅವರಿಂದ ವಶಪಡಿಸಿಕೊಳ್ಳಲಾಗಿದೆ ಎಂದು ಗೃಹ ಸಚಿವರು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

ಬಂಧಿತ ಐವರಲ್ಲಿ ನಾಲ್ವರು ಆಫ್ರಿಕಾದವರಾಗಿದ್ದಾರೆ ಸಚಿವ ಅಮಿತ್ ಶಾ ಅವರು ಎನ್‌ಸಿಬಿ ಹಾಗೂ ದೆಹಲಿ ಪೊಲೀಸರ ಕಾರ್ಯಾಚರಣೆಯನ್ನು ಶ್ಲಾಘಿಸಿದ್ದು, ಮಾದಕ ದ್ರವ್ಯಕ್ಕೆ ಸಂಬಂಧಿಸಿದ ಯಾವುದೇ ಚಟುವಟಿಕೆಗಳನ್ನು ಸರ್ಕಾರ ಸಹಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

****************

ಗ್ರಾಮೀಣ ಭಾಗದ ಯುವಕರು ನವೋದ್ಯಮ ಸ್ಥಾಪಿಸಲು ಮುಂದಾಗುವಂತೆ ಕೇಂದ್ರ ಕಲ್ಲಿದ್ದಲು ಗಣಿ ಖಾತೆ ಸಚಿವ ಜಿ.ಕಿಶನ್ ರೆಡ್ಡಿ ಕರೆ ನೀಡಿದ್ದಾರೆ.

ಅವರು ಹೈದಾರಾಬಾದ್‌ನಲ್ಲಿಂದು ವಿಕಸಿತ ಭಾರತ ಉದ್ದಿಮೆದಾರರ ಕಾರ್ಯಜಾಲ ಕಚೇರಿ ಉದ್ಘಾಟಿಸಿ ಮಾತನಾಡುತ್ತಿದ್ದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಯುವ ಜನತೆಗೆ ತಮ್ಮದೇ ಆದ ಉದ್ದಿಮೆ ಸ್ಥಾಪಿಸಲು ಪ್ರೋತ್ಸಾಹ ನೀಡುತ್ತಿದೆ. ಇದರಿಂದ ಹೆಚ್ಚು ಉದ್ಯೋಗಾವಕಾಶ ಸೃಷ್ಟಿಯಾಗಿ ದೇಶವನ್ನು ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸಲು ಒತ್ತಾಸೆ ದೊರಕುತ್ತದೆ ಎಂದರು.

ವಿಕಸಿತ ಭಾರತ ಉದ್ದಿಮೆದಾರರ ಕಾರ್ಯಜಾಲದಂತಹ ಸಂಘಟನೆಗಳು ನವೋದ್ಯಮಗಳಿಗೆ ಆರಂಭಿಕ ನೆರವು, ತರಬೇತಿ ಹಾಗೂ ತಿಳಿವಳಿಕೆ ನೀಡುತ್ತಿವೆ. ಇಂತಹ ಪ್ರಯತ್ನಗಳಿಂದ ಯುವ ಜನತೆ ಪ್ರಯೋಜನ ಪಡೆಯಲಿವೆ ಎಂದು ಸಚಿವ ಕಿಶನ್ ರೆಡ್ಡಿ ಹೇಳಿದ್ದಾರೆ.

***************

ನವದೆಹಲಿಯಲ್ಲಿ ನಾಳೆ ಸಿಬಿಐ ತನ್ನ ೬೨ನೇ ಸಂಸ್ಥಾಪನಾ ದಿನದ ಸಂದರ್ಭದಲ್ಲಿ ೨೧ನೇ ಡಿ.ಪಿ.ಕೊಹ್ಲಿ ಸ್ಮಾರಕ ಉಪನ್ಯಾಸವನ್ನು ಆಯೋಜಿಸಿದೆ.

ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಅವರು ಈ ಸಂದರ್ಭದಲ್ಲಿ ವಿಕಸಿತ ಭಾರತ್ ೨೦೪೭ ಸಿಬಿಐಗಾಗಿ ಒಂದು ಮಾರ್ಗಸೂಚಿ ಕುರಿತಂತೆ ಡಿ.ಪಿ.ಕೊಹ್ಲಿ ಸ್ಮಾರಕ ಉಪನ್ಯಾಸವನ್ನು ನೀಡಲಿದ್ದಾರೆ.

ವಿಶಿಷ್ಟ ಸೇವೆಗಳಿಗಾಗಿ ರಾಷ್ಟ್ರಪತಿಗಳ ಪೊಲೀಸ್ ಪದಕಗಳನ್ನು ಮತ್ತು ಗಣನೀಯ ಸೇವೆಗಾಗಿ ಪೊಲೀಸ್ ಪದಕಗಳನ್ನು ಸಿಬಿಐ ಅಧಿಕಾರಿಗಳಿಗೆ ಸಚಿವರು ಪ್ರದಾನ ಮಾಡಲಿದ್ದಾರೆ.

***************

ನಾಳೆ ಹೊಸ ಹಣಕಾಸು ವರ್ಷ ಪ್ರಾರಂಭವಾಗಲಿದ್ದು, ಕೆಲವು ಪ್ರಮುಖ ತೆರಿಗೆ ಹಾಗೂ ಹಣಕಾಸು ಬದಲಾವಣೆಗಳು ಮತ್ತು ಕೆಲವು ನೀತಿ ಸುಧಾರಣೆಗಳು ಜಾರಿಗೆ ಬರಲಿವೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಹೊಸ ಆದಾಯ ತೆರಿಗೆ ಸ್ಲ್ಯಾಬ್‌ಗಳು ಈ ಹಣಕಾಸು ವರ್ಷದಿಂದ ಅನ್ವಯವಾಗಲಿವೆ. ನಾಳೆಯಿಂದ, ೧೨ ಲಕ್ಷ ರೂಪಾಯಿ ಬಳ ಪಡೆಯುವ ವ್ಯಕ್ತಿಯು ಹೊಸ ತೆರಿಗೆ ವ್ಯವಸ್ಥೆ ಆರಿಸಿಕೊಂಡರೆ, ಯಾವುದೇ ತೆರಿಗೆಯನ್ನು ಪಾವತಿಸಬೇಕಾಗಿಲ್ಲ.

ಡಿಜಿಟಲ್ ಪಾವತಿಗಳು ನಾಳೆಯಿಂದ ಹೊಸ ಬದಲಾವಣೆಯನ್ನು ಹೊಂದಿರುತ್ತವೆ. ದೀರ್ಘಕಾಲದ ನಿಷ್ಕ್ರಿಯ ಸ್ಥಿತಿಯಿಂದ ಇರುವ ಮೊಬೈಲ್ ಸಂಖ್ಯೆಗಳಿಗೆ ಯುಪಿಐ ಪಾವತಿ ಇರುವುದಿಲ್ಲ.

ಎಲ್ಲಾ ಬ್ಯಾಂಕ್ ಗ್ರಾಹಕರು ತಮ್ಮ ಖಾತೆಗಳಲ್ಲಿ ಕನಿಷ್ಠ ಬ್ಯಾಲೆನ್ಸ್ ಹೊಂದಿರುವುದು ಕಡ್ಡಾಯವಾಗಲಿದೆ. ಒಂದು ವೇಳೆ ವಿಫಲವಾದರೆ ಬ್ಯಾಂಕ್ ಭಾರಿ ದಂಡ ವಿಧಿಸಬಹುದಾಗಿದೆ.

***************

ಕೇಂದ್ರ ಸರ್ಕಾರಿ ನೌಕರರಿಗಾಗಿ ಏಕೀಕೃತ ಪಿಂಚಣಿ ಯೋಜನೆ ಯುಪಿಎಸ್ ನಾಳೆ ಜಾರಿಗೆ ಬರಲಿದೆ. ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ಆಯ್ಕೆ ರೂಪದಲ್ಲಿ ಯುಪಿಎಸ್ ಪರಿಚಯಿಸಲಾಗಿದೆ.

***************

ದೇಶದಲ್ಲಿ ಆಯುಷ್ಮಾನ್ ಭಾರತ್ ಯೋಜನೆಯಡಿ ೧೫೦ ದಶಲಕ್ಷಕ್ಕೂ ಅಧಿಕ ಮಹಿಳೆಯರನ್ನು ಸ್ತನ ಕ್ಯಾನ್ಸರ್ ತಪಾಸಣೆಗೆ ಒಳಪಡಿಸಲಾಗಿದೆ ಎಂದು ಕೇಂದ್ರ ಆರೋಗ್ಯ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಹೇಳಿದ್ದಾರೆ.

ಅವರು, ನವದೆಹಲಿಯಲ್ಲಿಂದು ಬ್ರೆಸ್ಟ್ ಇಮೇಜಿನೇಷನ್ ಆಫ್ ಇಂಡಿಯಾ ಆಯೋಜಿಸಿದ್ದ ಮಿಡ್ ಟರ್ಮ್ ಬಿಸಿಕಾನ್ ೨೦೨೫ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿ, ದೇಶಾದ್ಯಂತ ೨೦೦ ಡೇ ಕೇರ್ ಕ್ಯಾನ್ಸರ್ ಕೇಂದ್ರಗಳನ್ನು ತೆರೆಯಲಾಗುತ್ತಿದೆ ಎಂದರು.

ಆರೋಗ್ಯಕರ ಜೀವನ ಶೈಲಿ, ತಿಳಿವಳಿಕೆ, ಸಕಾಲದಲ್ಲಿ ಸ್ಕ್ರೀನಿಂಗ್ ಹಾಗೂ ಉಪಚಾರಗಳಿಂದ ಸ್ತನ ಕ್ಯಾನ್ಸರ್ ಮರಣ ಪ್ರಮಾಣವನ್ನು ಕಡಿಮೆಗೊಳಿಸಬಹುದಾಗಿದೆ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿದ್ದು, ವ್ಯಾಪಕ ಉಪಕ್ರಮಗಳನ್ನು ಕೈಗೊಂಡಿದೆ ಎಂದು ಸಚಿವೆ ಅನುಪ್ರಿಯಾ ಪಟೇಲ್ ತಿಳಿಸಿದ್ದಾರೆ.

ಭಾರತದಲ್ಲಿ ಪ್ರತಿ ವರ್ಷ ವರದಿಯಾಗುತ್ತಿರುವ ೧.೪ ಮಿಲಿಯನ್ ಹೊಸ ಕ್ಯಾನ್ಸರ್ ಪ್ರಕರಣಗಳಲ್ಲಿ ಸುಮಾರು ೨ ಲಕ್ಷ ಸ್ತನ ಕ್ಯಾನ್ಸರ್ ಪ್ರಕರಣಗಳು ಸೇರಿವೆ.

****************

ಭೂಕಂಪದಿಂದಾಗಿ ಸಂಭವಿಸಿರುವ ವಿಕೋಪಗಳ ಹಿನ್ನೆಲೆಯಲ್ಲಿ ಮ್ಯಾನ್ಮಾರ್ ಇಂದು ಏಳು ದಿನಗಳ ರಾಷ್ಟ್ರೀಯ ಶೋಕ ಘೋಷಿಸಿದೆ. ಈ ಅವಧಿಯಲ್ಲಿ ಶೋಕದ ಪ್ರತೀಕವಾಗಿ ರಾಷ್ಟ್ರಧ್ವಜವನ್ನು ಅರ್ಧಮಟ್ಟದಲ್ಲಿ ಹಾರಿಸಲಾಗುತ್ತದೆ ಎಂದು ಮ್ಯಾನ್ಮಾರ್ ಸರ್ಕಾರದ ಆಡಳಿತ ಮಂಡಳಿ ಅಧ್ಯಕ್ಷ ಸೀನಿಯರ್ ಜನರಲ್ ಮಿನ್ ಔಂಗ್ ಲೇಯಿಂಗ್ ತಿಳಿಸಿದ್ದಾರೆ.

ಕಳೆದ ಶುಕ್ರವಾರ ೭.೭ ಪ್ರಮಾಣದಲ್ಲಿ ಸಂಭವಿಸಿದ ಭೂಕಂಪದಿಂದಾಗಿ ಸಂಪೂರ್ಣ ಮಂಡಲೆ ಪ್ರದೇಶದಲ್ಲಿ ಅಪಾರ ಪ್ರಮಾಣದ ಆಸ್ತಿ ಹಾಗೂ ಪ್ರಾಣ ಹಾನಿ ಸಂಭವಿಸಿದೆ. ಮ್ಯಾನ್ಮಾರ್‌ನಲ್ಲಿ ಭೂಕಂಪದಿಂದ ಉಂಟಾದ ಅನಾಹುತದಿಂದ ಮೃತಪಟ್ಟವರ ಸಂಖ್ಯೆ ೨ ಸಾವಿರದ ೫೦ ದಾಟಿದ್ದು, ೩ ಸಾವಿರದ ೯೦೦ ಜನರಿಗೆ ಗಾಯಗಳಾಗಿದೆ. ೨೭೦ಕ್ಕೂ ಅಧಿಕ ಜನರು ಕಾಣೆಯಾಗಿದ್ದಾರೆ.

ಮ್ಯಾನ್ಮಾರ್‌ನಲ್ಲಿ ಶುಕ್ರವಾರ ಸಂಭವಿಸಿದ ಭಾರೀ ಪ್ರಮಾಣದ ಭೂಕಂಪದ ನಂತರ ಇಂದಿನವರೆಗೆ ೩೬ ಬಾರಿ ಭೂಮಿ ಕಂಪಿಸಿದೆ ಎಂದು ಹವಾಮಾನ ಹಾಗೂ ಜಲ ಅಧ್ಯಯನ ಇಲಾಖೆ ತಿಳಿಸಿದೆ.

****************

ಭೂಕಂಪದಿಂದ ತತ್ತರಿಸಿರುವ ಮ್ಯಾನ್ಮಾರ್‌ನ ಮಂಡಲೆ ಪ್ರದೇಶಕ್ಕೆ ಮಾನವೀಯ ಸಹಾಯದ ಸಾಮಗ್ರಿಗಳೊಂದಿಗೆ ಧಾವಿಸಿರುವ ಭಾರತದ ಪರಿಹಾರ ತಂಡ ಬದುಕುಳಿದವರಿಗಾಗಿ ನಡೆದಿರುವ ಶೋಧಕಾರ್ಯಕ್ಕೆ ನೆರವಾಗುತ್ತಿದೆ.

ಭಾರತ ಬ್ರಹ್ಮಾ ಕಾರ್ಯಾಚರಣೆ ಮೂಲಕ ಆಹಾರ ಪಡಿತರ, ಟೆಂಟ್, ಬಟ್ಟೆ, ಔಷಧಿ, ಕುಡಿಯುವ ನೀರು ಸೇರಿದಂತೆ ವಿವಿಧ ತಾತ್ಕಾಲಿಕ ಪರಿಹಾರ ಸಾಮಗ್ರಿಗಳನ್ನು ಮ್ಯಾನ್ಮಾರ್‌ಗೆ ರವಾನಿಸಿದೆ.

ಮಂಡಲೆ ಹಾಗೂ ಯಂಗ್‌ಗೂನ್ ಪ್ರದೇಶಗಳಿಗೆ ಭಾರತದಿಂದ ಹೆಚ್ಚಿನ ನೆರವಿನ ಸಾಮಗ್ರಿಗಳು ಬರುತ್ತಿವೆ ಎಂದು ಯಂಗ್‌ಗೂನ್‌ನಲ್ಲಿ ಇರುವ ಭಾರತೀಯ ರಾಯಭಾರಿ ಕಚೇರಿ ತಿಳಿಸಿದೆ.

ಭೂಕಂಪದಿಂದ ತೀವ್ರ ಹಾನಿಗೀಡಾಗಿರುವ ಮಂಡಲೆ, ನೈಪ್ಯುಟೌವ್, ಸಗೈಂಗ್ ಮತ್ತು ಬಾಗೊ ಪ್ರದೇಶದ ಜನರಿಗೆ ನೆರವು ಒದಗಿಸಲು ಭಾರತ ಬದ್ಧವಾಗಿದೆ ಎಂದು ತಿಳಿಸಲಾಗಿದೆ.

****************

ಐಪಿಎಲ್ ಕ್ರಿಕೆಟ್‌ನಲ್ಲಿಂದು ಮುಂಬೈ ವಾಂಖೇಡೆ ಕ್ರೀಡಾಂಗಣದಲ್ಲಿ ಮುಂಬೈ ಇಂಡಿಯನ್ಸ್ ತಂಡ ಹಾಗೂ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡ ಕೊಲ್ಕತ್ತಾ ನೈಟ್ ರೈಡರ್ಸ್ ತಂಡ ಬ್ಯಾಟಿಂಗ್ ಫೀಲ್ಡಿಂಗ್ ಆಯ್ಕೆ ಮಾಡಿದೆ.

********ಮುಕ್ತಾಯ********